**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಹಿಂದುಳಿದ ವರ್ಗಗಳ ಸಮುದಾಯಗಳಿಗೆ ಸಮುದಾಯ ಭವನ/ವಿದ್ಯಾರ್ಥಿ ನಿಲಯ ಕಟ್ಟಡ ನಿರ್ಮಾಣಕ್ಕೆ ಸಹಾಯಧನ ನೀಡುವ ಕಾರ್ಯಕ್ರಮದ ಪರಿಷ್ಕೃತ ಮಾರ್ಗಸೂಚಿಗಳು

30/11/2017

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ಸಕಇ 208 ಬಿಎಂಎಸ್ 2010, ದಿನಾಂಕ: 04/09/2010.
2. ಸರ್ಕಾರದ ಆದೇಶ ಸಂಖ್ಯೆ: ಸಕಇ 178 ಬಿಎಂಎಸ್ 2012, ದಿನಾಂಕ: 06/06/2012.
3. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 359 ಬಿಎಂಎಸ್ 2013 ದಿನಾಂಕ:21.12.2013.
4. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 695 ಬಿಎಂಎಸ್ 2014 (ಭಾಗ-2), ದಿನಾಂಕ:05.11.2014
5. ಆಯುಕ್ತರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಪ್ರಸ್ತಾವನೆ ಸಂಖ್ಯೆ:ಹಿಂವಕಇ-14011/982/2017-ಹಿಂವಕಇ, ದಿನಾಂಕ 21.10.2017

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ಆದೇಶದಲ್ಲಿ ಹಿಂದುಳಿದ ವರ್ಗಗಳ ಸಮುದಾಯಗಳಿಗೆ ಸಮುದಾಯ ಭವನ/ವಿದ್ಯಾರ್ಥಿ ನಿಲಯ ಕಟ್ಟಡ ನಿರ್ಮಾಣ ಕಾರ್ಯಕ್ರಮಗಳಿಗೆ ಸಹಾಯಧನ ಮಂಜೂರು ಮಾಡುವ ಕುರಿತು ಮಾರ್ಗಸೂಚಿಗಳಲ್ಲಿ ಕೆಲವು ಮಾನದಂಡಗಳನ್ನು ನಿಗದಿಪಡಿಸಿ ಆದೇಶ ಹೊರಡಿಸಲಾಗಿದೆ. ಮೇಲೆ ಓದಲಾದ ಕ್ರಮ ಸಂಖ್ಯೆ(2)ರ ಆದೇಶದಲ್ಲಿ ಸಹ ಹಿಂದುಳಿದ ವರ್ಗಗಳ ವಿವಿಧ ಸಮುದಾಯಗಳಿಗೆ ಸಮುದಾಯ ಭವನ/ವಿದ್ಯಾರ್ಥಿ ನಿಲಯ ಕಟ್ಟಡಗಳ ಅಭಿವೃದ್ಧಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಸಹಾಯಧನ ಮಂಜೂರು ಮಾಡುವ ಕುರಿತು ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ. ತದನಂತರ, ಮೇಲೆ ಓದಲಾದ ಕ್ರಮ ಸಂಖ್ಯೆ(3)ರ ಆದೇಶದಲ್ಲಿ ಹಿಂದುಳಿದ ವರ್ಗಗಳ ವಿವಿಧ ಸಮುದಾಯಗಳಿಗೆ ಸಮುದಾಯ ಭವನ/ವಿದ್ಯಾರ್ಥಿ ನಿಲಯ ಕಟ್ಟಡಗಳ ನಿರ್ಮಾಣಕ್ಕಾಗಿ ಸರ್ಕಾರದ ಸಹಾಯಧನ ಮಂಜೂರು ಮಾಡುವ ಕುರಿತು ಮಾರ್ಗಸೂಚಿಗಳನ್ನು ಪರಿಷ್ಕರಿಸಿ ಆದೇಶ ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರ.ಸಂ(5)ರಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,ಬೆಂಗಳೂರು ರವರು ಪ್ರಸ್ತಾವನೆ ಸಲ್ಲಿಸಿ, ಮೇಲೆ ಓದಲಾದ ಕ್ರಮ ಸಂಖ್ಯೆ(4)ರ ಆದೇಶದ ಅನುಬಂಧ-ಅ ರ ಕೆಲವೊಂದು ಉಪ ಕ್ರಮಾಂಕಗಳನ್ನು ಪರಿಷ್ಕರಿಸಿ, ಪರಿಷ್ಕೃತ ಮಾರ್ಗಸೂಚಿಗಳನ್ನು ಹೊರಡಿಸಲು ಪ್ರಸ್ತಾಪಿಸಿರುತ್ತಾರೆ.

...2

ಅದರಂತೆ ಈ ಪ್ರಸ್ತಾವನೆಯನ್ನು ಪರಿಶೀಲಿಸಿ, ಹಿಂದುಳಿದ ವರ್ಗಗಳ ಸಮುದಾಯಗಳಿಗೆ ಸಮುದಾಯ ಭವನ/ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣಕ್ಕೆ ಸಹಾಯಧನ ಮಂಜೂರಾತಿ ನೀಡುವ ಸಂಬಂಧ ಪರಿಷ್ಕೃತ ಮಾರ್ಗಸೂಚಿಯನ್ನು ಹೊರಡಿಸಲು ಸರ್ಕಾರವು ತೀರ್ಮಾನಿಸಿದ್ದು, ಅದರಂತೆ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಹಿಂವಕ 1133 ಬಿಎಂಎಸ್ 2017, ದಿನಾಂಕ:29/11/2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಹಿಂದುಳಿದ ವರ್ಗಗಳ ಸಮುದಾಯಗಳಿಗೆ ಸಮುದಾಯ ಭವನ/ವಿದ್ಯಾರ್ಥಿ ನಿಲಯ ಕಟ್ಟಡ ನಿರ್ಮಾಣಕ್ಕೆ ಸಂಬಂಧಿಸಿದಂತೆ ಸರ್ಕಾರಿ ಆದೇಶ ಸಂಖ್ಯೆ:ಹಿಂವಕ 695 ಬಿಎಂಎಸ್ 2014(ಭಾ-2), ದಿನಾಂಕ:05.11.2014ರ ಮಾರ್ಗಸೂಚಿಗೆ ಈ ಕೆಳಕಂಡಂತೆ ಪರಿಷ್ಕೃತ ಮಾರ್ಗಸೂಚಿಯನ್ನು ದಿನಾಂಕ:05.11.2014ರಿಂದ ಪೂರ್ವಾನ್ವಯವಾಗಿ ಜಾರಿಗೊಳಿಸಲು ಆದೇಶಿಸಿದೆ.

**ಹಾಲಿ ಇರುವ ಮಾರ್ಗಸೂಚಿ**

(ಅ) ಅನುಬಂಧ-ಅ ರ ಕ್ರಮ ಸಂಖ್ಯೆ:3ರ ಉಪ ಕ್ರಮಾಂಕ -(8)ಕ್ಕೆ ಸಂಬಂಧಿಸಿದಂತೆ

ಈ ಕೆಳಗಿನ ಪ್ರದೇಶಗಳಲ್ಲಿ ನಿರ್ಮಿಸುವ ಸಮುದಾಯ ಭವನ/ವಿದ್ಯಾರ್ಥಿನಿಲಯ ಕಟ್ಟಡಗಳಿಗೆ ಅನುದಾನದ ಗರಿಷ್ಠ ಮಿತಿಯನ್ನು ಕೆಳಕಂಡಂತೆ ನಿಗದಿಪಡಿಸಿದೆ.

| ಕ್ರ ಸಂ | ಸ್ಥಳ | ಗರಿಷ್ಠ ಸಹಾಯಧನ |
|---|---|---|
| 1 | ಗ್ರಾಮ ಪಂಚಾಯಿತಿ/ ಪಟ್ಟಣ ಪಂಚಾಯಿತಿ | ರೂ.10.00 ಲಕ್ಷ |
| 2 | ತಾಲ್ಲೂಕು ಕೇಂದ್ರ ಸ್ಥಾನ | ರೂ.25.00 ಲಕ್ಷ |
| 3 | ಜಿಲ್ಲಾ ಕೇಂದ್ರ ಸ್ಥಾನ | ರೂ.50.00 ಲಕ್ಷ |

ಮೇಲ್ಕಂಡ ಗರಿಷ್ಠ ಸಹಾಯಧನ ಮೊತ್ತವನ್ನು ಸಡಿಲಗೊಳಿಸಿ ಹೆಚ್ಚಿನ ಮೊತ್ತವನ್ನು ಮಂಜೂರು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

**ಪರಿಷ್ಕರಿಸಿರುವ ಮಾರ್ಗಸೂಚಿ**

1) ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಹಾಗೂ ಜಿಲ್ಲಾ ಕೇಂದ್ರದಲ್ಲಿ ಸಮುದಾಯ ಭವನ/ವಿದ್ಯಾರ್ಥಿನಿಲಯ ಕಟ್ಟಡಗಳ ನಿರ್ಮಾಣಕ್ಕೆ ಹಾಲಿ ಅನುಕ್ರಮವಾಗಿ ನಿಗದಿಪಡಿಸಿರುವ ರೂ.10.00 ಲಕ್ಷ, ರೂ 25.00 ಲಕ್ಷ, ರೂ.50.00 ಲಕ್ಷ ಮಂಜೂರಾತಿ ಮಿತಿಯನ್ನು ಅಗತ್ಯ ಸಂದರ್ಭಗಳಲ್ಲಿ ಸಡಿಲಗೊಳಿಸಿ ವಿಶೇಷ ಪ್ರಕರಣವೆಂದು ಹೆಚ್ಚುವರಿಯಾಗಿ ಸರ್ಕಾರದ ಹಂತದಲ್ಲಿ ಮಂಜೂರು ಮಾಡುವುದು.

2) ಸಮುದಾಯ ಭವನ ಹಾಗೂ ವಿದ್ಯಾರ್ಥಿನಿಲಯ ಕಟ್ಟಡಗಳ ನಿರ್ಮಾಣಕ್ಕೆ ಪ್ರಸ್ತಾವನೆಯಲ್ಲಿ ತಿಳಿಸುವ ಜನಸಂಖ್ಯೆಯನ್ನು ಆಧರಿಸಿ ಹೆಚ್ಚು ಜನಸಂಖ್ಯೆ ಇರುವ ಸ್ಥಳಗಳಲ್ಲಿ ಹಾಲಿ ಇರುವ ಅನುದಾನದ ರೂ.10.00 ಲಕ್ಷ, ರೂ.25.00 ಲಕ್ಷ, ರೂ.50.00 ಲಕ್ಷ ಮಂಜೂರಾತಿ ಮಿತಿಯನ್ನು ಸಡಿಲಗೊಳಿಸಿ ಹೆಚ್ಚುವರಿ ಅನುದಾನವನ್ನು ಮಂಜೂರು ಮಾಡುವುದು.

3) ಈಗಾಗಲೇ ಸಮುದಾಯ ಭವನ/ ವಿದ್ಯಾರ್ಥಿ ನಿಲಯ ಕಟ್ಟಡಗಳ ನಿರ್ಮಾಣಕ್ಕೆ ಒಂದು ಮತ್ತು ಒಂದಕ್ಕಿಂತ ಹೆಚ್ಚು ಬಾರಿ ಅನುದಾನ ಮಂಜೂರು ಮಾಡಿರುವ ಸಮುದಾಯ ಭವನಗಳಿಗೆ ಹೆಚ್ಚುವರಿ ಅನುದಾನ ಅಗತ್ಯವಿದ್ದಲ್ಲಿ, ಸರ್ಕಾರದ ಹಂತದಲ್ಲಿ ವಿಶೇಷ ಪ್ರಕರಣದಡಿ ಹೆಚ್ಚುವರಿ ಅನುದಾನ ಮಂಜೂರು ಮಾಡುವುದು.

...3

| (ಅ) ಅನುಬಂಧ-ಅ ರ ಕ್ರಮ ಸಂಖ್ಯೆ:3ರ ಉಪ ಕ್ರಮಾಂಕ -(23)ಕ್ಕೆ ಸಂಬಂಧಿಸಿದಂತೆ | |
|---|---|
| ಈ ಕಾರ್ಯಕ್ರಮದಡಿ ಆಯವ್ಯಯದಲ್ಲಿ ಹಂಚಿಕೆಯಾದ ಅನುದಾನದ ಶೇ.70ನ್ನು ಪ್ರವರ್ಗ-1 ಹಾಗೂ 2ಎ ಸಮುದಾಯಕ್ಕೆ ಮತ್ತು ಶೇ.30ನ್ನು ಪ್ರವರ್ಗ-3ಎ ಹಾಗೂ 3ಬಿ ಸಮುದಾಯಕ್ಕೆ ಹಂಚಿಕೆ ಮಾಡುವುದು. ವಿಶೇಷ ಸಂದರ್ಭದಲ್ಲಿ ಸರ್ಕಾರದ ಪೂರ್ವಾನುಮೋದನೆ ಪಡೆದು ಹೆಚ್ಚುವರಿ ಹಂಚಿಕೆ ಮಾಡಬಹುದಾಗಿದೆ. | ಈ ಕಾರ್ಯಕ್ರಮದಡಿ ಆಯವ್ಯಯದಲ್ಲಿ ಹಂಚಿಕೆಯಾದ ಅನುದಾನವನ್ನು ಪ್ರವರ್ಗ-1 ಹಾಗೂ 2ಎಗೆ ಮಾತ್ರ ಸೀಮಿತಗೊಳಿಸಿ ಮಂಜೂರು ಮಾಡುವುದು. ಪ್ರವರ್ಗ-3ಎ, 3ಬಿ ಹಾಗೂ ಇತರ ಪ್ರವರ್ಗಗಳಿಗೆ ಅನುದಾನ ಮಂಜೂರು ಮಾಡುವ ಸಂದರ್ಭದಲ್ಲಿ, ಅನುದಾನ ಮಂಜೂರು ಮಾಡಲು ಸರ್ಕಾರದ ಅನುಮೋದನೆ ಕಡ್ಡಾಯವಾಗಿ ಪಡೆಯತಕ್ಕದ್ದು. |

ಮುಂದುವರೆದು, ಸರ್ಕಾರದ ಆದೇಶ ಸಂಖ್ಯೆ:ಹಿಂವಕ 695 ಬಿಎಂಎಸ್ 2014(ಭಾ-2), ದಿನಾಂಕ:05.11.2014ರ ಅನುಬಂಧ-ಅ ರ ಕ್ರಮ ಸಂಖ್ಯೆ:3ರ ಉಪ ಕ್ರಮಾಂಕ:10ನ್ನು ಕೈಬಿಡಲಾಗಿದ್ದು, ಉಳಿದ ಉಪ ಕ್ರಮಾಂಕಗಳು ಮತ್ತು ಅನುಬಂಧಗಳು ದಿನಾಂಕ:05.11.2014ರ ಆದೇಶದಲ್ಲಿ ತಿಳಿಸಿರುವಂತೆ ಯಥಾವತ್ತಾಗಿ ಮುಂದುವರೆಯುವುದು.

ಈ ಆದೇಶವನ್ನು ಸನ್ಮಾನ್ಯ ಮುಖ್ಯಮಂತ್ರಿಯವರ ಟಿಪ್ಪಣಿ ಸಂಖ್ಯೆ: 5463, ದಿನಾಂಕ:09.11.2017ರ ಅನುಮೋದನೆಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಆರ್. ಭಾಸ್ಕರ್)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು-ಇವರಿಗೆ ಮುಂದಿನ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 500 ಪ್ರತಿಗಳನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, 2ನೇ ಮಹಡಿ, ವಿಕಾಸ ಸೌಧ, ಬೆಂಗಳೂರು ಇವರಿಗೆ ಕಳುಹಿಸಲು ಕೋರಿದೆ.

ಗೆ:

1. ಪ್ರಧಾನ ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು
2. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ-II ರವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನೆ ಇಲಾಖೆ, ಬಹು ಮಹಡಿ ಕಟ್ಟಡ, ಬೆಂಗಳೂರು
5. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.

..4

6. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು
7. ಎಲ್ಲಾ ಜಿಲ್ಲಾಧಿಕಾರಿಗಳು
8. ಎಲ್ಲಾ ಜಿಲ್ಲೆಗಳ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು
9. ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳು,

} ಆಯುಕ್ತರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಮೂಲಕ

10. ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
11. ಸರ್ಕಾರದ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
12. ಸರ್ಕಾರದ ಉಪ ಕಾರ್ಯದರ್ಶಿಗಳ ಆಪ್ತ ಸಹಾಯಕರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
13. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು